ಕರ್ನಾಟಕ ಸರ್ಕಾರ

# ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಇವರ ನಡವಳಿಗಳು

**ವಿಷಯ:** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಮೌಲಾನಾ ಆಜಾದ್ ಮಾದರಿ ಶಾಲೆಗಳ ನಿರ್ವಹಣೆಗೆ ಅಕ್ಟೋಬರ್, ನವೆಂಬರ್ ಹಾಗೂ ಡಿಸೆಂಬರ್ ತಿಂಗಳುಗಳಿಗೆ ಮೂರನೇ ತ್ರೈಮಾಸಿಕ ಅನುದಾನ ಬಿಡುಗಡೆ ಮಾಡುವ ಕುರಿತು.

**ಉಲ್ಲೇಖ:**

1. ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲೂಡಿ 159 ಎಂಡಿಎಸ್ 2021 ಬೆಂಗಳೂರು ದಿನಾಂಕ: 12.04.2021
2. ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲೂಡಿ 159 ಎಂಡಿಎಸ್ 2021 ಬೆಂಗಳೂರು ದಿನಾಂಕ: 22.10.2021

**ಪ್ರಸ್ತಾವನೆ:-**

ಉಲ್ಲೇಖ (1) ರ ಸರ್ಕಾರಿ ಆದೇಶದಲ್ಲಿ 2020-21 ನೇ ಸಾಲಿನಲ್ಲಿ ಚಾಲ್ತಿಯಲ್ಲಿರುವ ಯೋಜನೆಗಳನ್ನು 2021-22 ನೇ ಸಾಲಿಗೆ ಮುಂದುವರಿಸಲು ಆದೇಶಿಸಿದೆ. ಉಲ್ಲೇಖ (2) ರ ಸರ್ಕಾರಿ ಆದೇಶದಲ್ಲಿ 2021-22ನೇ ಸಾಲಿನಲ್ಲಿ ಮೌಲಾನಾ ಆಜಾದ್ ಮಾದರಿ ಶಾಲೆಗಳ ನಿರ್ವಹಣೆಗೆ ಮೂರನೇ ತ್ರೈಮಾಸಿಕ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ರಾಜ್ಯಾದ್ಯಂತ ಕಾರ್ಯನಿರ್ವಹಿಸುತ್ತಿರುವ ಮೌಲಾನಾ ಆಜಾದ್ ಮಾದರಿ ಶಾಲೆಗಳ ನಿರ್ವಹಣೆಗೆ ಸ್ವಚ್ಛತಾ ಸಾಮಾಗ್ರಿ, ಸ್ಯಾನಿಟೈಸರ್, ಲೇಖನ ಸಾಮಾಗ್ರಿ, ಡ್ರಾಯಿಂಗ್ ವಸ್ತುಗಳ ಖರೀದಿ, ಪ್ರಯೋಗಾಲಯಕ್ಕೆ ಅಗತ್ಯ ವಸ್ತುಗಳ ಖರೀದಿ, ವಾರ್ತಾ ಪತ್ರಿಕೆ/ಪುಸ್ತಕ ಖರೀದಿ, ರಾಷ್ಟ್ರೀಯ ಹಬ್ಬಗಳ ಸಾಂಸ್ಕೃತಿಕ ವೆಚ್ಚ ಮತ್ತು ಇತರೆ ವೆಚ್ಚಗಳನ್ನು ಭರಿಸಲು ಅನುಬಂಧ-01 ರಲ್ಲಿ ನಮೂದಿಸಿರುವಂತೆ ರೂ.30,000/-ಗಳನ್ನು ಪ್ರತಿ ಶಾಲೆಗೆ ಅಕ್ಟೋಬರ್, ನವೆಂಬರ್ ಹಾಗೂ ಡಿಸೆಂಬರ್ ತಿಂಗಳುಗಳಿಗೆ ಅನುಬಂಧ-02 ರಲ್ಲಿ ನಮೂದಿಸಿರುವ ಜಿಲ್ಲಾವಾರು ಒಟ್ಟು **ರೂ.60,00,000/-(ಅರವತ್ತು ಲಕ್ಷ ರೂ.ಗಳು ಮಾತ್ರ)**ಗಳ ಅನುದಾನವನ್ನು ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರಿಗೆ ಬಿಡುಗಡೆ ಮಾಡಲು ನಿರ್ಧರಿಸಿದ್ದು ಅದರಂತೆ ಈ ಆದೇಶ.

## ಆದೇಶ

**ಸಂಖ್ಯೆ: ಅಸಂನಿ/ಅ/ಮೌಶಾ/ಅನುದಾನ/ಸಿಆರ್-14(059)/2021-22** **ದಿನಾಂಕ: 8.11.2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನಾಧರಿಸಿ, ರಾಜ್ಯಾದ್ಯಂತ ಕಾರ್ಯನಿರ್ವಹಿಸುತ್ತಿರುವ ಮೌಲಾನಾ ಆಜಾದ್ ಮಾದರಿ ಶಾಲೆಗಳ ನಿರ್ವಹಣೆಗೆ ಸ್ವಚ್ಛತಾ ಸಾಮಾಗ್ರಿ, ಸ್ಯಾನಿಟೈಸರ್, ಲೇಖನ ಸಾಮಾಗ್ರಿ, ಡ್ರಾಯಿಂಗ್ ವಸ್ತುಗಳ ಖರೀದಿ, ಪ್ರಯೋಗಾಲಯಕ್ಕೆ ಅಗತ್ಯ ವಸ್ತುಗಳ ಖರೀದಿ, ವಾರ್ತಾ ಪತ್ರಿಕೆ/ಪುಸ್ತಕ ಖರೀದಿ, ರಾಷ್ಟ್ರೀಯ ಹಬ್ಬಗಳ ಸಾಂಸ್ಕೃತಿಕ ವೆಚ್ಚ ಮತ್ತು ಇತರೆ ವೆಚ್ಚಗಳನ್ನು ಭರಿಸಲು ಅನುಬಂಧ-01 ರಲ್ಲಿ ನಮೂದಿಸಿರುವಂತೆ ರೂ.30,000/-ಗಳನ್ನು ಪ್ರತಿ ಶಾಲೆಗೆ ಅಕ್ಟೋಬರ್, ನವೆಂಬರ್ ಹಾಗೂ ಡಿಸೆಂಬರ್ ತಿಂಗಳುಗಳಿಗೆ ಅನುಬಂಧ-02 ರಲ್ಲಿ ನಮೂದಿಸಿರುವ ಜಿಲ್ಲಾವಾರು ಒಟ್ಟು **ರೂ.60,00,000/-(ಅರವತ್ತು ಲಕ್ಷ ರೂ.ಗಳು ಮಾತ್ರ)**ಗಳ ಅನುದಾನವನ್ನು ಸಂಬಂಧಪಟ್ಟ ಜಿಲ್ಲೆಯ **ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ** ರವರಿಗೆ ಈ ಕೆಳಕಂಡಂತೆ ನಿಬಂಧನೆಗಳಿಗೆ ಒಳಪಟ್ಟು ಅನುದಾನ ಬಿಡುಗಡೆ ಮಾಡಿದೆ.

Contd...2

(ಪ್ರತಿ ಶಾಲೆಗೆ)

| ಅನುಬಂಧ-01 | | |
|---|---|---|
| ಕ್ರ.ಸಂ | ವಿವರ | ಒಟ್ಟು |
| 1 | ಸ್ವಚ್ಛತಾ ಸಾಮಾಗ್ರಿ (ಸ್ಯಾನಿಟೈಸರ್ ಇತ್ಯಾದಿ) | 5,000.00 |
| 2 | ಲೇಖನ ಸಾಮಾಗ್ರಿ ಹಾಗೂ ಡ್ರಾಯಿಂಗ್ ವಸ್ತುಗಳ ಖರೀದಿ | 5,000.00 |
| 3 | ಪ್ರಯೋಗಾಲಯಕ್ಕೆ ಅಗತ್ಯ ವಸ್ತುಗಳ ಖರೀದಿ ವೆಚ್ಚ | 5,000.00 |
| 4 | ಮಾಸಿಕ ಹಾಗೂ ವಾರ್ಷಿಕ ಪರೀಕ್ಷಾ ವೆಚ್ಚ | 5,000.00 |
| 5 | ವಾರ್ತಾ ಪತ್ರಿಕೆ/ಪುಸ್ತಕ ಖರೀದಿ | 5,000.00 |
| 6 | ರಾಷ್ಟ್ರೀಯ ಹಬ್ಬಗಳ ಸಾಂಸ್ಕೃತಿಕ ವೆಚ್ಚ | 5,000.00 |
| ಒಟ್ಟು ಮೊತ್ತ | | **30,000.00** |

**ನಿಬಂಧನೆಗಳು:-**

1) ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನವನ್ನು ಕಡ್ಡಾಯವಾಗಿ 2021-22ನೇ ಸಾಲಿನ ಶಾಲೆಗಳ ನಿರ್ವಹಣಾ ವೆಚ್ಚಗಳನ್ನು ಪಾವತಿಸಲು ಮಾತ್ರ ಭರಿಸತಕ್ಕದ್ದು.
2) **ಈ ಆದೇಶದಲ್ಲಿ ಬಿಡುಗಡೆ ಮಾಡಲಾದ ಅನುದಾನವನ್ನು ಯಾವ ಉದ್ದೇಶಕ್ಕೆ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಮಾತ್ರ ಬಳಸಿಕೊಳ್ಳತಕ್ಕದ್ದು, ಯಾವುದೇ ಕಾರಣಕ್ಕೂ ಅನುದಾನವನ್ನು ಮಾರ್ಗಪಲ್ಲಟ ಮಾಡುವಂತಿಲ್ಲ**. ತಪ್ಪಿದ್ದಲ್ಲಿ ಮುಂದಿನ ಎಲ್ಲಾ ಆಗು ಹೋಗುಗಳಿಗೆ ತಮ್ಮನ್ನು ನೇರ ಹೊಣೆಗಾರನ್ನಾಗಿ ಮಾಡಲಾಗುವುದು.
3) ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನವನ್ನು ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ರವರು ಕಡ್ಡಾಯವಾಗಿ ಸಂಬಂಧಪಟ್ಟ ಶಾಲೆಗಳಿಗೆ ಮರು ಬಿಡುಗಡೆಗೊಳಿಸಿ ಖರ್ಚು ವೆಚ್ಚಗಳನ್ನು ಭರಿಸುವುದು.
4) ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನಕ್ಕೆ ಖರ್ಚು ಭರಿಸಿರುವ ಅನುದಾನದ ವಿವರ, (ಖಜಾನೆಯಿಂದ ಪಡೆದ 62ಬಿ ಪ್ರತಿಯೊಂದಿಗೆ) ನಿರ್ದೇಶನಾಲಯಕ್ಕೆ ಸಲ್ಲಿಸತಕ್ಕದ್ದು.

ಇದಕ್ಕೆ ತಗಲುವ ವೆಚ್ಚವನ್ನು ಲೆಕ್ಕಶೀರ್ಷಿಕೆ 2225-04-277-0-09 ಆಬ್ಜೆಕ್ಟ್ ಕೋಡ್ (059) ಅಲ್ಪಸಂಖ್ಯಾರಿಗಾಗಿ ನೂತನ ಹಾಸ್ಟೆಲ್‌ಗಳ ಪ್ರಾರಂಭ ಮತ್ತು ಮೌಲಾನಾ ಆಜಾದ್ ಶಾಲೆಗಳ ನಿರ್ವಹಣೆ ರಾಜ್ಯವಲಯ ಯೋಜನೆಯಡಿ 2021-22 ನೇ ಸಾಲಿನಲ್ಲಿ ಒದಗಿಸಲಾದ ಆಯವ್ಯಯದಲ್ಲಿ ಭರಿಸತಕ್ಕದ್ದು.

ನಿರ್ದೇಶಕರು, 08/11/21
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,
ಬೆಂಗಳೂರು.

ಪ್ರತಿಯನ್ನು:-

1. ಕರ್ನಾಟಕ ಮಹಾಲೇಖಪಾಲರು, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ಬೆಂಗಳೂರು.
3. ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವೆಚ್ಚ-3, ಬೆಂಗಳೂರು.
4. ಉಪ ನಿರ್ದೇಶಕರು, ಖಜಾನೆ ಗಣಕೀಕರಣ ಕೇಂದ್ರ, 2ನೇ ಮಹಡಿ, ಖನಿಜ ಭವನ, ಬೆಂಗಳೂರು.
5. ಸಂಬಂಧಪಟ್ಟ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಗತ್ಯಕ್ರಮಕ್ಕಾಗಿ ಹಾಗೂ ಸಂಬಂದಪಟ್ಟ ಶಾಲೆಗಳ ಮುಖ್ಯೋಪಾಧ್ಯಾಯರಿಗೆ(ಜಿಲ್ಲಾ ಅಧಿಕಾರಿಗಳ ಮೂಲಕ).
6. ಸಂಬಂಧಪಟ್ಟ ಜಿಲ್ಲಾ ಖಜಾನಾಧಿಕಾರಿಗಳು.
7. ಲೆಕ್ಕಪತ್ರ ಶಾಖೆ.
8. ಹೆಚ್ಚುವರಿ ಪ್ರತಿ/ಕಛೇರಿ ಪ್ರತಿ.